# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ಹೆಚ್.ಎಂ.ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **114** |
| ಉತ್ತರಿಸಬೇಕಾದ ದಿನಾಂಕ | : | 16.02.2022 |
| ಉತ್ತರಿಸಬೇಕಾದ ಸಚಿವರು | : | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ಯಾವ ಯಾವ ಯೋಜನೆಗಳ ಮೂಲಕ ಬಡವರಿಗೆ ಮನೆಗಳನ್ನು ಹಂಚುವ ಕಾರ್ಯಕ್ರಮ ರೂಪಿಸಲಾಗಿದೆ; (ವಿವರ ನೀಡುವುದು) | ರಾಜ್ಯದಲ್ಲಿ ವಸತಿ ರಹಿತರಿಗೆ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ವಸತಿ ಸೌಕರ್ಯ ಕಲ್ಪಿಸಲು ಕೆಳಕಂಡ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.<br><br>**ರಾಜ್ಯ ಪುರಸ್ಕೃತ ಯೋಜನೆಗಳು:**<br>1. ಬಸವ ವಸತಿ ಯೋಜನೆ<br>2. ಡಾ. ಬಿ.ಆರ್. ಅಂಬೇಡ್ಕರ್ ವಸತಿ ಯೋಜನೆ (ಗ್ರಾಮೀಣ & ನಗರ)<br>3. ದೇವರಾಜು ಅರಸು ವಸತಿ ಯೋಜನೆ (ಗ್ರಾಮೀಣ & ನಗರ)<br>4. ವಾಜಪೇಯಿ ನಗರ ವಸತಿ ಯೋಜನೆ<br>5. ಮುಖ್ಯಮಂತ್ರಿಗಳ ಬಹುಮಹಡಿ ಬೆಂಗಳೂರು ವಸತಿ ಯೋಜನೆ (ಬೆಂಗಳೂರು ನಗರದಲ್ಲಿ ಮಾತ್ರ)<br><br>**ಕೇಂದ್ರ ಪುರಸ್ಕೃತ ಯೋಜನೆಗಳು**:<br>1. ಪ್ರಧಾನ ಮಂತ್ರಿ ಆವಾಸ್ ಯೋಜನೆ (ಗ್ರಾಮೀಣ)<br>2. ಪ್ರಧಾನ ಮಂತ್ರಿ ಆವಾಸ್ ಯೋಜನೆ (ನಗರ) |
| ಆ) | ಕಳೆದ 2 ವರ್ಷಗಳಿಂದ ನಿರ್ಮಾಣವಾಗದೇ ಉಳಿದಿರುವ ಮನೆಗಳನ್ನು ಪೂರ್ಣಗೊಳಿಸಲು ಸರ್ಕಾರ ಅಂತಿಮ ಗಡವು ನಿಗದಿಪಡಿಸಿದೆಯೇ; | "ಮನೆ" ಮಾರ್ಗಸೂಚಿ" ಗಳನ್ವಯ ನಿಯಮಾನುಸಾರ ಕ್ರಮ ವಹಿಸಲಾಗುತ್ತಿದೆ. |
| ಇ) | ವಸತಿ ಇಲಾಖೆಯಡಿ ನಿರ್ಮಾಣವಾಗುವ ಮನೆಗಳ ಗುಣಮಟ್ಟದ ಕುರಿತಾಗಿ ಪ್ರಶ್ನೆಗಳು ಎದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ? | **ಗ್ರಾಮೀಣ ಪ್ರದೇಶ :-**<br>ಗ್ರಾಮೀಣ ಪ್ರದೇಶದಲ್ಲಿ ವಸತಿ ಯೋಜನೆಯಡಿ ಆಯ್ಕೆಯಾಗಿರುವ ಫಲಾನುಭವಿಗಳು ತಮ್ಮ ಮನೆಗಳನ್ನು ಸ್ವತಃ ತಾವೇ ನಿರ್ಮಾಣ ಮಾಡಿ ಕೊಳ್ಳುವುದರಿಂದ ಗುಣ ಮಟ್ಟದ ಕುರಿತಾಗಿ ಪ್ರಶ್ನೆ ಉದ್ಭವಿಸುವುದಿಲ್ಲ.<br><br>**ನಗರ ಪ್ರದೇಶ : -**<br>ಪ್ರಧಾನ ಮಂತ್ರಿ ಆವಾಸ್ ಯೋಜನೆಯ ಎ.ಹೆಚ್.ಪಿ ಘಟಕದಡಿ ನಗರ ಪ್ರದೇಶಗಳ ವಿವಿಧ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ನಿರ್ಮಾಣ ಮಾಡುವ ಮನೆಗಳ ಗುಣಮಟ್ಟ ಕಾಪಾಡಲು ಯೋಜನೆಯ ಮಾರ್ಗಸೂಚಿಯ ಪ್ರಕಾರ ಪ್ರತಿ |

| | | |
|---|---|---|
| | | ಯೋಜನೆಯ Third Party Quality & Monitoring Agency (TPQMA) ಗಳನ್ನು ನೇಮಿಸಿ ಕೊಂಡು ಆ ಮುಖಾಂತರ ಹಂತ ಹಂತವಾಗಿ ಮನೆಗಳ ಗುಣ ಮಟ್ಟವನ್ನು ಪರಿಶೀಲಿಸಲಾಗುತ್ತಿದೆ. ಮುಂದುವರೆದು, ಪ್ರತಿ ಯೋಜನೆಗೂ ಸಹ Project Monitoring Consultants ನೇಮಿಸಿಕೊಂಡಿದ್ದು, ಸದರಿ PMC ಗಳ ಮುಖಾಂತರ ಮನೆಗಳ ನಿರ್ಮಾಣ ಕಾಮಗಾರಿಯ ಪ್ರಾರಂಭಿಕ ಹಂತದಿಂದ ಮುಕ್ತಾಯದ ಹಂತದವರೆವಿಗೂ ಕಾಮಗಾರಿಯ ಸಂಪೂರ್ಣ ಮೇಲ್ವಿಚಾರಣೆ ಮಾಡಲಾಗುತ್ತಿದೆ. |

ಸಂಖ್ಯೆ :ವಇ 31 ಹೆಚ್‌ಎಂ 2022

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು